ಧಾರವಾಡದ ಕನ್ನಡ ಹಾಗೂ ಇತರೆ ಪ್ರಾಥಮಿಕ ಶಾಲಾ ಕಟ್ಟಡಗಳ ಬಗ್ಗೆ

೩೧೩ (೪೪೨) ಶ್ರೀ ಚಂದ್ರಕಾಂತ ಜಿ. ಬೆಲ್ಲದ್ (ಧಾರವಾಡ ಶಹರ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ:—

ಅ) ಧಾರವಾಡದ ಶಹರ ಕ್ಷೇತ್ರದಲ್ಲಿ ಕನ್ನಡ ಪ್ರಾಥಮಿಕ ಹಾಗೂ ಉಳಿದ ಭಾಷೆಯ ಪ್ರಾಥಮಿಕ ಶಾಲೆಗಳಿಗೆ ಕೊಠಡಿಗಳು ಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಎಷ್ಟು ಕೊಠಡಿಗಳು ಬೇಕಾಗುವುದು ? (ವಿವರ ನೀಡುವುದು)

ಇ) ಧಾರವಾಡ ಶಹರದ ಸರ್ಕಾರಿ ಪ್ರೌಢಶಾಲೆಗಳಿಗೆ ಸ್ವಂತ ಕಟ್ಟಡ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಈ) ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಸ್ವಂತ ಕಟ್ಟಡಗಳ ಬೇಡಿಕೆ ಎಷ್ಟು ವರ್ಷಗಳಿಂದ ಸರ್ಕಾರದ ಮುಂದಿದೆ ? ಹಾಗೂ ಈ ಕಟ್ಟಡಗಳನ್ನು ಕಟ್ಟಲು ಸರ್ಕಾರ ಕೈಗೊಳ್ಳುವ ಕ್ರಮವೇನು ?

ಶ್ರೀ ಎಂ. ಚಂದ್ರಶೇಖರ್ (ಶಿಕ್ಷಣ ಮಂತ್ರಿಗಳು).—

ಅ) ಬಂದಿದೆ.

ಆ)

	ಶಾಲೆಯ ಹೆಸರು	ಬೇಕಾಗುವ ಕೊಠಡಿಗಳು
೧)	ಕನ್ನಡ ಗಂಡು ಮಕ್ಕಳ ಶಾಲೆ ನಂ. ೯	೧೫
೨)	ಕನ್ನಡ ಗಂಡು ಮಕ್ಕಳ ಶಾಲೆ ನಂ. ೧೩	೧೫
೩)	ಉರ್ದು ಗಂಡು ಮಕ್ಕಳ ಶಾಲೆ ನಂ. ೫	೮
೪)	ಉರ್ದು ಗಂಡು ಮಕ್ಕಳ ಶಾಲೆ ನಂ. ೨	೧೦
೫)	ಉರ್ದು ಗಂಡು ಮಕ್ಕಳ ಶಾಲೆ ನಂ. ೭	೮
೬)	ಉರ್ದು ಗಂಡು ಮಕ್ಕಳ ಶಾಲೆ ನಂ. ೧	೧೫
೭)	ಉರ್ದು ಗಂಡು ಮಕ್ಕಳ ಶಾಲೆ ನಂ. ೩	೧೦
	ಒಟ್ಟು	೮೧

ಇ) ಬಂದಿದೆ.

ಈ) ೧) ಧಾರವಾಡ ನಗರದಲ್ಲಿ ಒಂದು ವಸತಿ ಪ್ರೌಢಶಾಲೆ ಇದ್ದು ಇದಕ್ಕೆ ಕಟ್ಟಡ ನಿರ್ಮಿಸಲು ಧಾರವಾಡ ಜಿಲ್ಲಾ ಪರಿಷತ್ತಿಗೆ ಈಗಾಗಲೇ ಸೂಚಿಸಲಾಗಿದೆ.

೨) ರಾಜ್ಯದಲ್ಲಿ ಜಿಲ್ಲಾ ಪರಿಷತ್ತುಗಳು ಅಸ್ತಿತ್ವಕ್ಕೆ ಬಂದ ನಂತರ ಪ್ರಾಥಮಿಕ ಹಾಗೂ ಪ್ರೌಢಶಾಲಾ ಕಟ್ಟಡಗಳ ನಿರ್ಮಾಣವನ್ನು ಜಿಲ್ಲಾ ಪರಿಷತ್ತುಗಳಿಗೆ ವಹಿಸಿ ಕೊಟ್ಟಿದೆ.

೩) ಈ ಬಾಬಿಗಾಗಿ ಪ್ರತಿಯೊಂದು ಆರ್ಥಿಕ ಸಾಲಿನಲ್ಲೂ ಜಿಲ್ಲಾ ಪರಿಷತ್ತುಗಳಿಂದ ಸ್ವೀಕರಿಸಿದ ಪ್ರಸ್ತಾವನೆಗಳನ್ನು ಪರಿಶೀಲಿಸಿ ಪ್ರಾಥಮಿಕ ಹಾಗೂ ಪ್ರೌಢಶಾಲಾಕ ಟ್ಟಡಗಳ ನಿರ್ಮಾಣ ಕ್ಕಾಗಿ ಅಗತ್ಯವಿರುವ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ.

೪) ಧಾರವಾಡ ಜಿಲ್ಲಾ ಪರಿಷತ್ತು, ಪ್ರಾಥಮಿಕ ಹಾಗೂ ಪ್ರೌಢಶಾಲಾ ಕಟ್ಟಡಗಳ ಅಗತ್ಯಗಳನ್ನು ಗುರುತಿಸಿ ಈ ಕಟ್ಟಡಗಳನ್ನು ನಿರ್ಮಿಸಲು ಸೂಕ್ತ ಕ್ರಮ ಜರುಗಿಸಲು ಕೋರಲಾಗುವುದು.